# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್) : ಯು40109ಕೆಎ1999ಎಸ್‌ಜಿ025521**

## ಅಧಿಸೂಚನೆ

**ಸಂಖ್ಯೆ: ಕವಿಪ್ರನಿನಿ/ಬಿ16/86473/2018-19** **ದಿನಾಂಕ:** - 8 NOV 2021

**ವಿಷಯ:** ಕವಿಪ್ರನಿನಿಯ ಕಿರಿಯ ಸ್ಟೇಷನ್ ಪರಿಚಾರಕ ಮತ್ತು ಕಿರಿಯ ಪವರ್‌ಮ್ಯಾನ್ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸುತ್ತಿರುವ ಬಗ್ಗೆ.

**ಉಲ್ಲೇಖ:**
1. ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/86473(ಎನ್.ಹೆಚ್.ಕೆ)/2018-19, ದಿನಾಂಕ: 25.02.2019.
2. ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/86473(ಹೆಚ್.ಕೆ)/2018-19, ದಿನಾಂಕ: 25.02.2019.
3. ಸಹನಾ ಶಕ್ತಿ ಪರೀಕ್ಷೆಯನ್ನು ನಡೆಸುವ ಸಂಬಂಧ ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/86473/2018-19 ದಿನಾಂಕ: 05.10.2019. 10.12.2019, ಮತ್ತು 18.06.2020

****

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/86473(ಎನ್.ಹೆಚ್.ಕೆ)/2018-19, ದಿನಾಂಕ: 25.02.2019 ಮತ್ತು ಕವಿಪ್ರನಿನಿ/ಬಿ16/86473(ಹೆಚ್.ಕೆ)/2018-19, ದಿನಾಂಕ: 25.02.2019 ಕ್ಕೆ ಅನುಗುಣವಾಗಿ ನಿಗಧಿಪಡಿಸಿದ ಶೈಕ್ಷಣಿಯ ವಿದ್ಯಾರ್ಹತೆಯಲ್ಲಿ (ಎಸ್‌ಎಸ್‌ಎಲ್‌ಸಿ/10 ನೇ ತರಗತಿ) ಗಳಿಸಿರುವ ಅಂಕಗಳ ಅರ್ಹತೆಯ ಆಧಾರದ ಮೇಲೆ **ದಿನಾಂಕ: 21.10.2019 ರಿಂದ 22.10.2019, 27.12.2019 ಮತ್ತು 28.06.2020 ರಿಂದ 04.07.2020 ರವರೆಗೆ** ನಡೆದ ಸಹನಾ ಶಕ್ತಿ ಪರೀಕ್ಷೆಯಲ್ಲಿ ಕಿರಿಯ ಸ್ಟೇಷನ್ ಪರಿಚಾರಕ ಮತ್ತು ಕಿರಿಯ ಪವರ್‌ಮ್ಯಾನ್ ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕಟ್-ಆಫ್ (Cut-Off) ಅಂಕಗಳೊಂದಿಗೆ ಕವಿಪ್ರನಿನಿಯ ಅಂತರ್ಜಾಲ https://kptcl.karnataka.gov.in/recruitment ನಲ್ಲಿ ಪ್ರಕಟಿಸಲಾಗಿದೆ.

ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಮಂಜಸವಾದ ಆಕ್ಷೇಪಣೆಗಳಿದ್ದಲ್ಲಿ, ಸಹನಾ ಶಕ್ತಿ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ್ದ ಅಭ್ಯರ್ಥಿಗಳು ಮಾತ್ರ ಸೂಕ್ತ ವಿವರ ಹಾಗೂ ದಾಖಲಾತಿಗಳೊಂದಿಗೆ ತಮ್ಮ ಹೆಸರು ಹಾಗೂ ಅರ್ಜಿ ಸಂಖ್ಯೆಯನ್ನು ನಮೂದಿಸಿ kptclrecruitmentcell@gmail.com ಗೆ ಇ-ಮೇಲ್ ಮಾಡುವುದು. ಆಕ್ಷೇಪಣೆಗಳನ್ನು ಸಲ್ಲಿಸಲು **20.11.2021** ಕೊನೆಯ ದಿನಾಂಕವಾಗಿರುತ್ತದೆ.

ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**
**ನಿಗಮ ಕಾರ್ಯಾಲಯ, ಕವಿಪ್ರನಿನಿ,**
**ಕಾವೇರಿ ಭವನ, ಬೆಂಗಳೂರು.**